ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016–17 ದಿನಾಂಕ: 3-9-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಡಾ. ಸರ್ವೆಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ ಅಂಗವಾಗಿ ರಾಜ್ಯ ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ 2016ನೇ ಸಾಲಿನ ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ:<br><br>ಉದ್ಘಾಟನೆ:<br><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು,<br>ಕರ್ನಾಟಕ ಸರ್ಕಾರ.<br><br>ಪ್ರಶಸ್ತಿ ಪ್ರದಾನ:<br><br>ತನ್ವೀರ್ ಸೇಠ್,<br>ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು. | 05–09–2016<br>ಸೋಮವಾರ<br>ಬೆಳಿಗ್ಗೆ<br>11–00 ಗಂಟೆಗೆ | ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ. ಬೆಂಗಳೂರು |
| 2. | ಕರ್ನಾಟಕ ರೆಡ್‌ಕ್ರಾಸ್ ರಕ್ತನಿಧಿಯಲ್ಲಿ ಸಿಂಗಲ್ ಡೋನರ್ ಪ್ಲೇಟ್‌ಲೆಟ್ ಸೌಲಭ್ಯದ ಉದ್ಘಾಟನೆ.<br><br>ಉದ್ಘಾಟನೆ: | 06–09–2016<br>ಮಂಗಳವಾರ<br>ಬೆಳಿಗ್ಗೆ<br>11–00 ಗಂಟೆಗೆ | "ಜೇನಿ ಹೆನ್ರಿ ಡ್ಯೂನಾಂಟ್ ಸಭಾಂಗಣ"<br>ನಂ. 26, ರೆಡ್ ಕ್ರಾಸ್ ಭವನ, 1ನೇಮಹಡಿ, ರೇಸ್ ಕೋರ್ಸ್ ರಸ್ತೆ, |

| | | | |
|---|---|---|---|
| | ಶ್ರೀಮತಿ ಶಾಲಿನಿ ರಜನೀಶ್,<br>ಪ್ರಧಾನ ಕಾರ್ಯದರ್ಶಿಗಳು,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ<br><br>ಅಧ್ಯಕ್ಷತೆ:<br><br>ಬಸ್ರೂರು ರಾಜೀವ ಶೆಟ್ಟಿ,<br>ಸಭಾಪತಿಗಳು,<br>ಭಾರತೀಯ ರೆಡ್ ಕ್ರಾಸ್ ಸಂಸ್ಥೆ,<br>ಕರ್ನಾಟಕ ರಾಜ್ಯ ಶಾಖೆ | | ಬೆಂಗಳೂರು – 560 001. |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

# ವಾಹನ ತರಬೇತಿ

ಬೆಂಗಳೂರು ಸೆಪ್ಟೆಂಬರ್ 3 (ಕರ್ನಾಟಕ ವಾರ್ತೆ)

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಹೊಸೂರು ರಸ್ತೆ, ಬೆಂಗಳೂರು – 560 029 ಇಲ್ಲಿ 2016–17ನೇ ಸಾಲಿನ ಎಂ.ಡಿ.ಟಿ.ಎಸ್ ನಲ್ಲಿ ಭಾರಿ ವಾಹನ ಹಾಗೂ ಲಘು ವಾಹನ ತರಬೇತಿಗಾಗಿ ಪ್ರವೇಶವನ್ನು ಪಡೆಯಲು ಅರ್ಜಿಗಳನ್ನು ಸೆಪ್ಟೆಂಬರ್ 15 ರವರೆಗೆ ಪಡೆದು ಭರ್ತಿಮಾಡಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080–26562307 ಹಾಗೂ 9886341477 ಗೆ ಸಂಪರ್ಕಿಸಬಹುದು.

ಬಾಬು:ಜಿಪಿಆರ್

# ಮೂಲ ದಾಖಲಾತಿ ಪರಿಶೀಲನೆ

ಬೆಂಗಳೂರು ಸೆಪ್ಟೆಂಬರ್ 3 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಪೌರಾಡಳಿತ ನಿರ್ದೇಶನಾಲಯದಲ್ಲಿ ಮಹಾನಗರ ಪಾಲಿಕೆಗಳಲ್ಲಿ/ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅಭಿವೃದ್ಧಿ ಅಧಿಕಾರಿ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಸಿವಿಲ್) ಸಹಾಯಕ ಕಾರ್ಯಪಾಲಕ ಅಭಿಯಂತರರು (ನೀರು ಸರಬರಾಜು ಮತ್ತು ಒಳಚರಂಡಿ), ಪರಿಸರ ಅಭಿಯಂತರರು, ಸಹಾಯಕ ಅಭಿಯಂತರರು (ಸಿವಿಲ್) ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಲ್ಲಿ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಮತ್ತು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದಲ್ಲಿ ಸಹಾಯಕ ವ್ಯವಸ್ಥಾಪಕರು, ಗುಣಮಟ್ಟ ಪರಿವೀಕ್ಷಕರು ಮತ್ತು ಹಿರಿಯ ಸಹಾಯಕರು (ಲೆಕ್ಕಪತ್ರ), ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯಲ್ಲಿನ ಜಿಲ್ಲಾ ವಿಮಾಧಿಕಾರಿ/ಸಹಾಯಕ ನಿರ್ದೇಶಕರ ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆಯನ್ನು ಸೆಪ್ಟೆಂಬರ್ 7 ರಿಂದ 9 ರವರೆಗೆ ಆಯೋಗದ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರಗಳನ್ನು ಕಳುಹಿಸಲಾಗಿದೆ. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಗಳನ್ನು ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ "**http://kpsc.kar.nic.in/Eligibility List**" ರಲ್ಲಿ ಪ್ರಕಟಿಸಲಾಗಿದೆ.

ಬಾಬು:ಜಿಪಿಆರ್

## DOCUMENT VERIFICATION

Bengaluru, September 3 (Karnataka Information)

Karnataka Public Service Commission will be conducting original document verification of eligible candidates for recruitment to Development Officer/Assistant Executive Engineer (Civil)/Assistant Executive Engineer (WS&UGD)/Assistant Engineer (Civil)/Environmental Engineer in Mahanagara Palike/Local Bodies in the Dept. of Municipal Administration, District Disabled Welfare Officer in the Department of Disabled & Senior Citizen Rehabilitation and Assistant Manager/Quality Inspector/Senior Assistant (Accounts) in the Department of KF&CSC, District Insurance Officer/Assistant

Director in Karnataka Government Insurance Department from 07-09-2016 to 09-09-2016 at the Commission's Head Office, Bengaluru.

Notices have already been dispatched to the eligible candidates. The list of candidates eligible for original document verification been published in the Commission's Web Site "http://kpsc.kar.nic.in/Eligibility List".

babu:gpr.

## "ಭಾಗ್ಯವಾಣಿ" –ಅಭಿವೃದ್ಧಿ ಯೋಜನೆಗಳೊಂದಿಗೆ ಅರ್ಥಪೂರ್ಣ ಪಯಣ

ಬೆಂಗಳೂರು ಸೆಪ್ಟೆಂಬರ್ 3 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಆಕಾಶವಾಣಿ ಜೊತೆ ಜೊತೆಯಾಗಿ ಹೆಜ್ಜೆ ಹಾಕಲಿವೆ. ರಾಜ್ಯ ಸರ್ಕಾರದ ಮಹತ್ವದ ಯೋಜನೆಗಳ ಮಾಹಿತಿಯನ್ನು ಜನರಿಗೆ ಪರಿಣಾಮಕಾರಿಯಾಗಿ ತಲುಪಿಸುವ ಪ್ರಯತ್ನದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವಿನೂತನ ಕಾರ್ಯಕ್ರಮ "ಭಾಗ್ಯವಾಣಿ"–ಅಭಿವೃದ್ಧಿ ಯೋಜನೆಗಳೊಂದಿಗೆ ಅರ್ಥಪೂರ್ಣ ಪಯಣ ರೂಪಿಸಿದೆ.

ಆಕಾಶವಾಣಿಯಲ್ಲಿ ಈಗಾಗಲೇ ಜನಪ್ರಿಯವಾಗಿರುವ ಹಟ್ಟಿ–ಹರಟೆ ಮಾದರಿಯಲ್ಲಿ ಕಾರ್ಯಕ್ರಮವನ್ನು ವಿನ್ಯಾಸಗೊಳಿಸಲಾಗಿದ್ದು, ಸಾಮಾನ್ಯ ಅರ್ಥವಾಗುವ ರೀತಿಯಲ್ಲಿ ಗ್ರಾಮೀಣ ಜನರ ಆಡುನುಡಿಯಲ್ಲಿ ಯೋಜನೆಗಳ ಮಾಹಿತಿ ನೀಡುವ ಪ್ರಯತ್ನ ಮಾಡಲಾಗಿದೆ. ವಿವಿಧ ಇಲಾಖೆ ಅಧಿಕಾರಿಗಳು ಯೋಜನೆ ಮಾಹಿತಿ ನೀಡುವುದರ ಜೊತೆಗೆ ಯೋಜನೆಗಳ ಫಲಾನುಭವಿಗಳು ತಮ್ಮ ಅಭಿಪ್ರಾಯವನ್ನು ಹಂಚಿಕೊಳ್ಳಲಿದ್ದಾರೆ. ಸುಶ್ರಾವ್ಯ ಹಾಡುಗಳೊಂದಿಗೆ ಯೋಜನೆಗಳ ಕುರಿತು ಸಂವಾದ ಕೂಡ ನಡೆಯಲಿದೆ.

13 ಸರಣಿಗಳುಳ್ಳ ಈ ಭಾಗ್ಯವಾಣಿ ಸೆಪ್ಟೆಂಬರ್ 4 ರಿಂದ ನವೆಂಬರ್ 27 ರವರೆಗೆ ಪ್ರತಿ ಭಾನುವಾರ ರಾತ್ರಿ 7 ರಿಂದ 7.30 ಗಂಟೆಯವರೆಗೆ ರಾಜ್ಯದ 13 ಆಕಾಶವಾಣಿ ಕೇಂದ್ರಗಳ ಮೂಲಕ ರಾಜ್ಯಾದ್ಯಂತ ಪ್ರಸಾರವಾಗಲಿದೆ. ಈ ಕಾರ್ಯಕ್ರಮವನ್ನು ಮೈಸೂರು ಆಕಾಶವಾಣಿ ಕಾರ್ಯಕ್ರಮ ನಿರ್ವಾಹಕ ಎನ್. ಕೇಶವ್‌ಮೂರ್ತಿ ನಿರ್ಮಿಸಿದ್ದಾರೆ.

ಸೆಪ್ಟೆಂಬರ್ 4 ರಂದು ಅನ್ನಭಾಗ್ಯ ಯೋಜನೆ, ಸೆಪ್ಟೆಂಬರ್ 11 ರಂದು ಕೃಷಿಭಾಗ್ಯ ಯೋಜನೆ, ಸೆಪ್ಟೆಂಬರ್ 18 ರಂದು ಮನಸ್ವಿನಿ ಮತ್ತು ಮೈತ್ರಿ ಯೋಜನೆ ನೊಂದವರಿಗೆ ಸಾಂತ್ವನ, ಸೆಪ್ಟೆಂಬರ್ 25 ರಂದು ಋಣಮುಕ್ತ – ಹೊಸ ಬದುಕಿನ ಆಶಯಕ್ಕೆ ಮುನ್ನುಡಿ, ಅಕ್ಟೋಬರ್ 2 ರಂದು ಕ್ಷೀರಧಾರೆ–ಹೈನುಗಾರಿಕೆಗೆ ಉತ್ತೇಜನ, ಅಕ್ಟೋಬರ್ 9 ರಂದು ವಿಧ್ಯಾಸಿರಿ–ಓದುವ ಕನಸಿಗೆ ನೆರವು, ಅಕ್ಟೋಬರ್ 16 ರಂದು ಕ್ಷೀರಭಾಗ್ಯ–ಪೌಷ್ಟಿಕ ಮಕ್ಕಳು, ಅಕ್ಟೋಬರ್ 23 ರಂದು ತಳ ಸಮುದಾಯ ಏಳಿಗೆ–ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಜನರಿಗಾಗಿ ನೆರವು, ಅಕ್ಟೋಬರ್ 30 ರಂದು ಸ್ವಚ್ಛ ಭಾರತ್ ಮಿಷನ್–ನಿರ್ಮಲ ಭಾರತ್ ಅಭಿಯಾನ, ನವೆಂಬರ್ 6 ರಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ನರೇಗಾ, ಕುಡಿಯುವ ನೀರು, ಎನ್.ಆರ್.ಎಲ್.ಎಂ. ನವೆಂಬರ್ 13 ರಂದು ಜಲ ಸಂಪನ್ಮೂಲ ಹಾಗೂ ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿ ಯೋಜನೆಗಳು, ನವೆಂಬರ್ 20 ರಂದು ಇಂಧನ, ಸೌರ ವಿದ್ಯುತ್, ನಗರ ಜ್ಯೋತಿ, ಜೈವಿಕ ಇಂಧನ, ಭಾಗ್ಯಜ್ಯೋತಿ ಮತ್ತು ನವೆಂಬರ್ 27 ರಂದು ನಗರಾಭಿವೃದ್ಧಿ –ನಗರ ಬಡತನ ನಿರ್ಮೂಲನ ಹಾಗೂ ನಮ್ಮ ಮೆಟ್ರೋ ಕಾರ್ಯಕ್ರಮ ನಡೆಯಲಿದೆ.

ಸರ್ಕಾರ ಸಾಮಾನ್ಯ ಹಾಗೂ ಬಡ ಜನರಿಗೆ ಹಲವಾರು ಅಭಿವೃದ್ಧಿ ಕಾರ್ಯಕ್ರಮವನ್ನು ರೂಪಿಸುತ್ತದೆ. ಈ ಯೋಜನೆಗಳನ್ನು ಪರಿಣಾಮಕಾರಿಯಾಗಿ ತಿಳಿಸುವುದೇ ಭಾಗ್ಯವಾಣಿ ಸರಣಿಯ ಮುಖ್ಯ ಆಶಯವಾಗಿದೆ. ಈ ಕಾರ್ಯಕ್ರಮ ಅರ್ಧ ಗಂಟೆ ಅವಧಿಯದಾಗಿದ್ದು, ಆಕಾಶವಾಣಿ ಮೂಲಕ ಪ್ರಸಾರವಾಗುವ ಸರ್ಕಾರದ ವಿವಿಧ ಯೋಜನೆಗಳ ಮಾಹಿತಿ ಪಡೆದು ಸದುಪಯೋಗಪಡಿಸಿಕೊಳ್ಳುವಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕ ಎನ್. ಆರ್. ವಿಶುಕುಮಾರ್ ಕೋರಿದ್ದಾರೆ.

ಬಾಬು:ಜಿಪಿಆರ್

## ಲೇವಾದೇವಿ : ಪರವಾನಗಿ ಕಡ್ಡಾಯ

ಬೆಂಗಳೂರು ಸೆಪ್ಟೆಂಬರ್ 3 (ಕರ್ನಾಟಕ ವಾರ್ತೆ)

ಲೇವಾದೇವಿ, ಹಣಕಾಸು ಸಂಸ್ಥೆಗಳು, ಕರ್ನಾಟಕ ಲೇವಾವಿವಿಗಾರರ ಕಾಯ್ದೆ 1961 ರ ಪ್ರಕರಣ 5 ರಡಿ ಮತ್ತು ಗಿರಿವಿದಾರರು ಕರ್ನಾಟಕ ಗಿರಿವಿದಾರರ ಕಾಯ್ದೆ 1961 ರ ಪ್ರಕರಣ 3 ರಡಿ ಪರವಾನಗಿ ಕಡ್ಡಾಯವಾಗಿ ಹೊಂದಿರಬೇಕು. ಚೀಟಿ ವ್ಯವಹಾರ ನಡೆಸಲು ನಿಬಂಧಕರಿಂದ ಅನುಮತಿ ಪಡೆದಿರಬೇಕು ಎಂದು ರಾಜ್ಯ ಸಹಕಾರ ಇಲಾಖೆ ತಿಳಿಸಿದೆ.

ಸರ್ಕಾರದ ಅಧಿಸೂಚನೆಯನ್ವಯ ಲೇವಾದೇವಿದಾರರು ಭದ್ರತಾ ಸಾಲಕ್ಕೆ ವಾರ್ಷಿಕ ಶೇಕಡ 14% ಮತ್ತು ಭದ್ರತಾ ರಹಿತ ಸಾಲಕ್ಕೆ ವಾರ್ಷಿಕ ಶೇಕಡ 16% ಮಾತ್ರ ಬಡ್ಡಿ ವಿಧಿಸಲು ಅವಕಾಶವಿರುತ್ತದೆ. ಈ ದರಕ್ಕಿಂತ ಹೆಚ್ಚಿನ ಬಡ್ಡಿ ದರ ವಿದಿಸುವುದು ಅಪರಾದ. ಪರವಾನಗಿ ಪಡೆಯದೇ ಅನಧಿಕೃತವಾಗಿ ನಡೆಸುವ ಯಾವುದೇ ಲೇವಾದೇವಿ, ಹಣಕಾಸು ಸಂಸ್ಥೆ, ಗಿರವಿ, ಚೀಟಿ ಸಂಸ್ಥೆಗಳೊಡನೆ ಸಾರ್ವಜನಿಕರು ಯಾವುದೇ ವ್ಯವಹಾರವನ್ನು ನಡೆಸಬಾರದು.

ಲೇವಾದೇವಿ ಹಣಕಾಸು ಸಂಸ್ಥೆಗಳು ಮತ್ತು ಗಿರವಿದಾರರು ಬಡ್ಡಿ ದರವನ್ನು ಬಿಂಬಿಸುವ 2 x 1 ಅಡಿ ಫಲಕವನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು. ಸಾರ್ವಜನಿಕರಿಂದ ಅಧಿಕ ಬಡ್ಡಿ ವಸೂಲಾತಿ ಮಾಡಿದಲ್ಲಿ ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ ಅಧಿನಿಯಮ 2004 ರ ಪ್ರಕರಣ 4 ರಡಿ ಮೂರು ವರ್ಷಗಳ ಜೈಲು ಶಿಕ್ಷೆ ಮತ್ತು ರೂಪಾಯಿ ಮೂವತ್ತು ಸಾವಿರಗಳವರೆಗೆ ಜುಲ್ಮಾನೆ ವಿಧಿಸಬಹುದಾಗಿದೆ.

ಕಾಯ್ದೆಯ ಅವಕಾಶಗಳನ್ನು ಉಲ್ಲಂಘಿಸಿ ಅಧಿಕ ಬಡ್ಡಿ ವಸೂಲಾತಿ ಮಾಡಿದ ಅಥವಾ ಅನಧಿಕೃತವಾಗಿ ಲೇವಾದೇವಿ ವ್ಯವಹಾರ ಮಾಡುವುದು ಕಂಡುಬಂದಲ್ಲಿ ದೂರು ದಾಖಲಿಸಲು ಜಿಲ್ಲೆಯ ಜಿಲ್ಲಾಧಿಕಾರಿಗಳು, ಪೋಲೀಸ್ ವರಿಷ್ಠಾಧಿಕಾರಿಗಳು, ಸಹಕಾರ ಸಂಘಗಳ ನಿಬಂಧಕರು, ನಂ. 1, ಅಲಿ ಆಸ್ಕರ್ ರಸ್ತೆ, ಬೆಂಗಳೂರು – 560 052, ದೂರವಾಣಿ ಸಂಖ್ಯೆ – 080 – 22269636. ಆಯಾ ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರು, ಸಹಕಾರ ಇಲಾಖೆಯ ಸಹಕಾರ ಸಿಂಧು ಜಾಲತಾಣ ದಲ್ಲಿ ನಿಬಂಧಕರು/ಜಿಲ್ಲಾ ಉಪನಿಬಂಧಕರ ಕಚೇರಿ ವಿಳಾಸ ಮತ್ತು ದೂರವಾಣಿ ಸಂಖ್ಯೆ ಲಭ್ಯವಿರುತ್ತದೆ ಅಥವಾ ಪೊಲೀಸ್ ನಿಯಂತ್ರಣ ಕೊಠಡಿ ಸಂಖ್ಯೆ ಇವರನ್ನು ಸಂಪರ್ಕಿಸಬಹುದು ಎಂದು ರಾಜ್ಯ ಸಹಕಾರ ಇಲಾಖೆ ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್

## ಶುಭಾಶಯಗಳು

ಬೆಂಗಳೂರು ಸೆಪ್ಟೆಂಬರ್ 3 (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನ ಪರಿಷತ್ತಿನ ಉಪಸಭಾಪತಿ ಶ್ರೀ ಮರಿತಿಬ್ಬೇಗೌಡ ಅವರು ಗೌರಿ, ಗಣೇಶ ಹಬ್ಬದ ಶುಭಾಶಯಗಳನ್ನು ನಾಡಿನ ಜನತೆಗೆ ಕೋರಿದ್ದಾರೆ. ಇದೇ ಸಂದರ್ಭದಲ್ಲಿ ರಾಜ್ಯದ ಶಿಕ್ಷಕರಿಗೆ ಶಿಕ್ಷಕರ ದಿನಾಚರಣೆಯ ಶುಭಾಶಯವನ್ನು ಕೋರಿದ್ದಾರೆ.

ಬಾಬು:ಜಿಪಿಆರ್

# ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

**ಬೆಂಗಳೂರು ಸೆಪ್ಟೆಂಬರ್ 3 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ:04–09–2016ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. ಸಿದ್ದರಾಜು.ಎಂ.ಕೆ ಮತ್ತು ತಂಡ , ಬೆಂಗಳೂರು** ರವರಿಂದ **ಜಾನಪದ ಗೀತೆಗಳ** ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಶ್ರೀ.ನಡುವಿನಮಣಿ ಮತ್ತು ತಂಡದವರಿಂದ **ಸುಗಮ** ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ (ರಿ), ಲಾಲ್‌ಬಾಗ್, ಬೆಂಗಳೂರು ರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

5) ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

6) ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ–ಆಪರೇಟೀವ್ ಸೊಸೈಟಿ , ಲಾಲ್‌ಬಾಗ್ , ಬೆಂಗಳೂರು ರವರು ವಿವಿಧ ಅಲಂಕಾರಿಕ ಗಿಡಗಳ ಮಾರಾಟವನ್ನು ವಿಧಾನಸೌಧ ಮತ್ತು ಹೈಕೋರ್ಟ್ ಮುಂಭಾಗದ ಮೆಟ್ರೋ ನಿಲ್ದಾಣದ ಹತ್ತಿರ ಕೈಗೊಳ್ಳುತ್ತಾರೆ.

7) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಕುಮಾರಿ. ರಮ್ಯ ಕದಂಬಿ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ಶ್ರೀ.ವಾಣಿ ವಿದ್ಯಾ ಕೇಂದ್ರ, ರಾಜಾಜಿನಗರ, ಬೆಂಗಳೂರು ಶಾಲಾ ವಿದ್ಯಾರ್ಥಿಗಳಾದ ಕುಮಾರ. ರಘುವರ ಹೆಬ್ಬಾರ ಮತ್ತು ಗೌರವ್. ಟಿ ರವರಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

### II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- **ಬೆಳಿಗ್ಗೆ 6.00 ರಿಂದ 8.30 ಗಂಟೆಯವರೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು , ಬೆಂಗಳೂರು ನಗರ ಜಿಲ್ಲೆ ಮತ್ತು ಕ್ಲೂಮ್ಯಾಕ್ಸ್ ಡಯಾಗ್ನಿಸ್ಟಿಕ್ಸ್ ವತಿಯಿಂದ ಪೌಷ್ಠಿಕ ಆಹಾರ ಸಪ್ತಾಹ ಮತ್ತು ಆರೋಗ್ಯ ಶಿಭಿರ (ರಕ್ತದೊತ್ತಡ ಮತ್ತು ಸಕ್ಕರೆ ಅಂಶ ತಪಾಸಣೆ) ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.00 ಘಂಟೆಯವರೆಗೆ ಯೋಗ ಪ್ರಾಣ ವಿದ್ಯಾ ಸಂಸ್ಥೆಯ Soham Healing Center, ಆರ್.ಟಿ. ನಗರ ಬೆಂಗಳೂರು ರವರ ವತಿಯಿಂದ ಪ್ರಾಣ ಚಿಕಿತ್ಸೆ ನೀಡುವ ಕಾರ್ಯಕ್ರಮವನ್ನು ಉಚಿತವಾಗಿ ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯ ವತಿಯಿಂದ ವಿಕಲಚೇತನ ಉದ್ಯೋಗಸ್ಥ ಮಹಿಳೆಯರು ಸಿದ್ಧಪಡಿಸಿದ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

**ಬಾಬು/ಕೆಎಂ**